ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 28–12–2020

# ಮಾಧ್ಯಮ ಆಮಂತ್ರಣ

1) ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ನವೀಕೃತ ಕಚೇರಿ ಉದ್ಘಾಟನೆ :

ಡಾ : ಸಿ. ಎನ್. ಅಶ್ವಥ್‌ನಾರಾಯಣ್, ಉಪ ಮುಖ್ಯಮಂತ್ರಿಗಳು,

ಉಪಸ್ಥಿತಿ :

ಶ್ರೀಮತಿ ಕೆ. ರತ್ನಪ್ರಭ, ಅಧ್ಯಕ್ಷರು, ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರ

ವಿಶೇಷ ಆಹ್ವಾನಿತರು :

ಡಾ: ಎಸ್. ಸೆಲ್ವಕುಮಾರ್, ಐ.ಎ.ಎಸ್. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ

ದಿನಾಂಕ : 29–12–2020, ಮಂಗಳವಾರ, ಬೆಳಿಗ್ಗೆ: 10–00 ಗಂಟೆಗೆ

ಸ್ಥಳ : ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರ, 4 ನೇ ಮಹಡಿ, ಕಲ್ಯಾಣ ಸುರಕ್ಷಾ ಭವನ, ಡೈರಿ ವೃತ್ತ, ಬನ್ನೇರುಘಟ್ಟ, ಬೆಂಗಳೂರು –560 029

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 9900225036

## ಪತ್ರಿಕಾ ಪ್ರಕಟಣೆ

## ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ನವೀಕೃತ ಕಛೇರಿ ಉದ್ಘಾಟನೆ

**ಬೆಂಗಳೂರು, ಡಿಸೆಂಬರ್ 28 (ಕರ್ನಾಟಕ ವಾರ್ತೆ):** ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ನವೀಕೃತ ಕಛೇರಿಯನ್ನು ಡಿಸೆಂಬರ್ 29 ರಂದು ಬೆಳಿಗ್ಗೆ 11 ಗಂಟೆಗೆ ಉಪ ಮುಖ್ಯಮಂತ್ರಿ ಡಾ: ಸಿ. ಎನ್ ಅಶ್ವಥ್ ನಾರಾಯಣ ಅವರು ಕರ್ನಾಟಕ ಕೌಶಲ್ಯ ಆಬಿವೃದ್ಧಿ ಪ್ರಾಧಿಕಾರ, 4ನೇ ಮಹಡಿ, ಕಲ್ಯಾಣ ಸುರಕ್ಷಾ ಭವನ, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29 ಇಲ್ಲಿ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಕೆ. ರತ್ನಪ್ರಭ ವಹಿಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕನ್ನಡ ಅಸ್ಮಿತೆಯಾಗಿರುವ ಹಂಪಿ ಕನ್ನಡ ವಿವಿ ಉಳಿಸಿಕೊಳ್ಳುವುದು ಎಲ್ಲರ ಜವಾಬ್ದಾರಿ: ಟಿ.ಎಸ್.ನಾಗಾಭರಣ

ಬೆಂಗಳೂರು: ಹಂಪಿ ವಿಶ್ವವಿದ್ಯಾಲಯವು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವ ಮೂಲಕ ಸಮಸ್ಯೆಗಳನ್ನು ಬಗೆಹರಿಸಿ ವಿವಿಯ ಪ್ರಗತಿಗೆ ಸಹಕಾರ ನೀಡುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ ಅವರು ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ ಅವರಲ್ಲಿ ಮನವಿ ಮಾಡಿದ್ದಾರೆ.

ವಿಶ್ವದಲ್ಲಿಯೇ ಭಾಷೆಗಾಗಿಯೇ ಇರುವ ಏಕೈಕ ವಿಶ್ವವಿದ್ಯಾಲಯವೆಂಬ ಹೆಗ್ಗಳಿಕೆಯ ಹಿನ್ನೆಲೆಯಲ್ಲಿ ಹುಟ್ಟಿಕೊಂಡಿರುವ ಹಂಪಿ ಕನ್ನಡ ವಿಶ್ವವಿದ್ಯಾಲಯವು ಕನ್ನಡದ ಬದುಕಿನ ವಿವೇಕದಂತೆ ಕೆಲಸ ಮಾಡಿದೆ. ಮರೆತು ಹೋಗಬಹುದಾಗಿದ್ದ ನಮ್ಮ ದೇಸಿ ಮಾರ್ಗದ ಹೆಸರುಗಳನ್ನು ಕಟ್ಟಡಗಳಿಗೆ ಇಟ್ಟು, ಯುವಕರ ಭಾವಕೋಶದಲ್ಲಿ ಉಳಿಯುವಂತೆ ಮಾಡಿದೆ. ಕನ್ನಡ ವಿಶ್ವ ವಿದ್ಯಾಲಯ ಕೇವಲ ವಿದ್ಯೆಯನ್ನು ನೀಡುವುದಕ್ಕೆ ಸೀಮಿತವಾಗಿರದೆ, ಕನ್ನಡ ನಾಡಿನ ಪ್ರಗತಿಗೆ ಸಂಬಂಧಿಸಿದ ಹಲವು ಆಶಯಗಳ ಬುನಾದಿಯಾಗಿ ಕೆಲಸ ನಿರ್ವಹಿಸುತ್ತಿರುವ ವಿವಿಯ ಉಳಿವಿಗೆ ಮತ್ತು ಕನ್ನಡದ ಅಸ್ಮಿತೆಗಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯವನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಉಪಮುಖ್ಯಮಂತ್ರಿಗಳಿಗೆ ಬರೆಯಲಾಗಿರುವ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಕನ್ನಡ ಪ್ರಜ್ಞೆ ವಿಶ್ವ ಪ್ರಜ್ಞೆಯಾಗಬೇಕೆಂಬುದು ಕೇವಲ ಆಶಯವಲ್ಲ ಅದು ವಾಸ್ತವವಾಗುವುದರ ಕಡೆಗೆ ಹಂಪಿ ಕನ್ನಡ ವಿಶ್ವವಿದ್ಯಾಲಯವು ಅಡಿಯಿಟ್ಟಿದೆ. ಕನ್ನಡದ ಜ್ಞಾನವನ್ನು ವಿಶ್ವಭಾಷೆಗಳ ಮೂಲಕ

ವಿಶ್ವಕ್ಕೆ ನೀಡುವ ಕಾರ್ಯದಲ್ಲಿ ಮಡಿವಂತಿಕೆಗೆ ಒಳಗಾಗಿಲ್ಲ. ಜಾಗತೀಕರಣದ ಸವಾಲುಗಳಿಗೆ ದೇಸಿ ಜ್ಞಾನಪರಂಪರೆಯ ಮೂಲಕ ಉತ್ತರಿಸುವ ನೈತಿಕ ಹೊಣೆಗಾರಿಕೆಯನ್ನು ಬಹು ಎಚ್ಚರದಿಂದ ವಿಶ್ವವಿದ್ಯಾಲಯ ಉಳಿಸಿಕೊಂಡಿದೆ. ಕನ್ನಡಿಗರ ನೂರಾರು ಕನಸುಗಳನ್ನು ಸಾಕಾರಗೊಳಿಸಲೆಂದು ಹುಟ್ಟಿದ ಹಂಪಿ ಕನ್‌ನಡ ವಿಶ್ವವಿದ್ಯಾಲಯವನ್ನು ಇಳಿಸಿಕೊಳ್ಳುವ ಸಲುವಾಗಿ ಈಗಾಗಲೇ ನಾಡಿನ ಸಾಹಿತಿಗಳು, ಪ್ರಗತಿಪರ ಚಿಂತಕರಿಂದ "ಹಂಪಿ ಕನ್ನಡ ವಿಶ್ವವಿದ್ಯಾಲಯ ಉಳಿಸಿ" ಎಂಬ ಜಾಲತಾಣ ಆಂದೋಲನವು ಪ್ರಾರಂಭವಾಗಿದ್ದು, ಪರಿಸ್ಥಿತಿ ಕೈಮೀರುವ ಮೊದಲೇ ಕನ್ನಡ ವಿವಿಗೆ ಅನುದಾನ ಬಿಡುಗಡೆಗೆ ಶೀಘ್ರ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಪ್ರಸ್ತಾಪಿಸಿದ್ದಾರೆ.

ಹಂಪಿ ಕನ್ನಡ ವಿಶ್ವವಿದ್ಯಾಲಯ ರಾಜ್ಯ ಸರ್ಕಾರ ಒದಗಿಸುವ ಅನುದಾನ ಮತ್ತು ಕೆಲ ಸಂಘ ಸಂಸ್ಥೆಗಳು ಒದಗಿಸುವ ಸಹಕಾರದಿಂದ ಮುನ್ನಡೆಯುತ್ತಿರುವ ರಾಜ್ಯದ ಮಹತ್ವದ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿದೆ. ಹೊಸ ತಲೆಮಾರಿನ ವಿದ್ವಾಂಸರು ವಿಭಿನ್ನ ದೃಷ್ಟಿಕೋನದಲ್ಲಿ ನಾಡು-ನುಡಿಗಳ ಕುರಿತು ಅಧ್ಯಯನ ನಡೆಸಲು ಪ್ರಸ್ತುತ ವಿಶ್ವವಿದ್ಯಾಲಯವು ಅವರಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದೆ.

ಜಾಗತೀಕರಣ ಮತ್ತು ಖಾಸಗೀಕರಣದ ಪ್ರಬಲ ಹೊಡೆತಕ್ಕೆ ಸಿಕ್ಕು ಸಾವಿರಾರು ಸಣ್ಣ ಭಾµÉಗಳು ಅವಸಾನದ ಅಂಚಿಗೆ ತಲುಪಿವೆ. ಈ ಸಂಬಂಧ ಯೂನೇಸ್ಕೋ ನೀಡಿದ ಎಚ್ಚರ ಕೂಡ ಯಾರ ಕಿವಿಯನ್ನೂತಲುಪುತ್ತಿಲ್ಲ ಎಂದಿರುವ ಅವರು, ಇಂಥ ದುರ್ಭರ ಸಂದರ್ಭದಲ್ಲಿ ಕನ್ನಡ ಭಾµÉ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅತ್ಯಮೂಲ್ಯ ಕೊಡುಗೆ ನೀಡುತ್ತಿರುವ ಕನ್ನಡ ವಿಶ್ವವಿದ್ಯಾಲಯಕ್ಕೆ ಸೂಕ್ತ ಅನುದಾನ ನೀಡದಿರುವುದು ರಾಜ್ಯ ಸರ್ಕಾರದ ಕನ್ನಡ ವಿರೋಧಿ ಧೋರಣೆಗೆ ಸಾಕ್ಷಿಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## <u>ದತ್ತು ಸ್ವೀಕಾರ</u>

**ಬೆಂಗಳೂರು, ಡಿಸೆಂಬರ್ 28 (ಕರ್ನಾಟಕ ವಾರ್ತೆ):**

**ಮೈಸೂರು ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ ಅಡಿಯಲ್ಲಿ ಪಾರ್ಥಸಾರಥಿ, ಬೆಂಗಳೂರು ಅವರು ಕಾಳಿಂಗ ಸರ್ಪ, ರಶ್ಮಿ ಮಂಡ್ಯ -ನಾಗರಹಾವು, ಗೀತ ಲೋಕಪಾಲ್ ವೋರ ಮಹಾರಾಷ್ಟ್ರ- ಲವ್‌ಬರ್ಡ್, ಜೀವಧರ್ ಬ್ಲಡ್ ಬ್ಯಾಂಕ್ ಮೈಸೂರು-ಹೊಲಾಕ್ ಗಿಬ್ಬನ್ , ಜಿ. ಎನ್. ಸುಮ ಮೈಸೂರು-**

ಕಾಳಿಂಗ ಸರ್ಪ, ತಮ್ಮೇಶ್ ಗೌಡ, ಕರ್ನಾಟಕ ವಿದ್ಯುತ್‌ಚಕ್ತಿ, ಅವರು ಚೀತ ಪ್ರಾಣಿ, ಅಪೆಕ್ಸ್ ಸಾಫ್ಟ್‌ಸೆಲ್ (ಇಂಡಿಯ)ಪ್ರೈವೆಟ್ ಲಿ, ಮುಂಬೈ ಅವರು ಏಷ್ಯಾಟಿಕ್ ಆನೆಯನ್ನು ದತ್ತುಸ್ವೀಕಾರ ಮಾಡಿರುತ್ತಾರೆಂದು ಮೃಗಾಲಯದ ಪ್ರಕಟಣೆ ತಿಳಿಸಿದೆ.

**ಶ್ರೀಮತಿ ತಾರಾಅನುರಾಧಾಇವರಿಂದಜೀವವೈವಿಧ್ಯ ಮಂಡಳಿ ವಾರ್ತಾ ಪತ್ರ ಬಿಡುಗಡೆ.**

**ಪ್ರೊ॥.ಬಿ.ಎಂ.ಕುಮಾರಸ್ವಾಮಿಅವರಿಂದಔಷಧೀ ಸಸ್ಯಗಣತಿಯೋಜನೆ ಸಂಕ್ಷಿಪ್ತ ವರದಿ ಬಿಡುಗಡೆ.**

**ಬೆಂಗಳೂರು:** ದಿನಾಂಕ: 28–12–2020 ರಂದುಬೆಂಗಳೂರಿನ ಜೀವವೈವಿಧ್ಯ ಮಂಡಳಿ ಕಛೇರಿಯಲ್ಲಿಕರ್ನಾಟಕಜೀವವೈವಿಧ್ಯ ಮಂಡಳಿಯ ವಾರ್ತಾ ಪತ್ರವನ್ನುಖ್ಯಾತ ಚಲನಚಿತ್ರಕಲಾವಿದೆ ಹಾಗೂ ಅರಣ್ಯಅಭಿವೃದ್ಧಿ ನಿಗಮದಅಧ್ಯಕ್ಷೆ ಶ್ರೀಮತಿ ತಾರಾಅನುರಾಧಾ ಬಿಡುಗಡೆ ಮಾಡಿದರು. ಪರಿಸರತಜ್ಞ ಪ್ರೊ॥.ಬಿ.ಎಂ.ಕುಮಾರ ಸ್ವಾಮಿಅವರುಔಷಧೀ ಸಸ್ಯಗಣತಿಯೋಜನೆಕಾರ್ಯಾಗಾರದ ವರದಿ ಬಿಡುಗಡೆ ಮಾಡಿದರು.ಜೀವವೈವಿಧ್ಯ ಮಂಡಳಿ ಅಧ್ಯಕ್ಷ ಶ್ರೀ ಅನಂತ ಹೆಗಡೆ ಅಶೀಸರ ಅಧ್ಯಕ್ಷತೆ ವಹಿಸಿದ್ದರು.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :28.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 112 | Moderate | $PM_{.10}$ |
| 2 | Jayanagar 5th Block, Shalini ground | 162 | Moderate | $PM_{2.5}$ |

| | | | | |
|---|---|---|---|---|
| 3 | KAVIKA, Mysore Road | 142 | Moderate | $PM_{.2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 104 | Moderate | $PM_{10}$ |
| 5 | HSR Layout, near Central Silkboard | 133 | Moderate | $PM_{2.5}$ |
| 6 | City Railway Station, Magestic, Bengaluru | 98 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 29 | Good | $PM_{10}$ |
| 8 | BWSSB, Kadabesanahalli | 48 | Good | $PM_{2.5}$ |
| 9 | Peenya | 99 | Satisfactory | $PM_{2.5}$ |
| 10 | BTM Layout | 117 | Moderate | $O_3$ |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**
**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 28.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 112 | ಸಾಧಾರಣ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 162 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 142 | ಸಾಧಾರಣ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 104 | ಸಾಧಾರಣ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, [illegible] | 133 | ಸಾಧಾರಣ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 98 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 29 | ಉತ್ತಮ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 48 | ಉತ್ತಮ | $PM_{2.5}$ |
| 9 | ಪೀಣ್ಯ | 99 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 117 | ಸಾಧಾರಣ | $O_3$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |